## 17. ಎಂಟು ಹಾಟ್‌ಸ್ಪಾಟ್ ಜಿಲ್ಲೆಗಳಲ್ಲಿ ಹೆಚ್ಚು ನಿಗಾ

ಸೋಂಕಿತರ ಸಂಖ್ಯೆ ಹೆಚ್ಚಿರುವ ಹಾಗೂ ಸೋಂಕು ಹರಡಬಹುದಾದ ರಾಜ್ಯದ ಎಂಟು ಜಿಲ್ಲೆಗಳನ್ನು ಕೇಂದ್ರ ಸರ್ಕಾರ ಹಾಟ್‌ಸ್ಪಾಟ್ ಎಂದು ಗುರುತಿಸಿದ್ದು, ಇಲ್ಲಿ ಹೆಚ್ಚು ನಿಗಾ ವಹಿಸುವಂತೆ ಗೃಹ ಸಚಿವ ಬಸವರಾಜ ಬೊಮ್ಮಾಯಿ ಆದೇಶಿಸಿದ್ದಾರೆ.

ದೇಶದ 170 ಜಿಲ್ಲೆಗಳನ್ನು ಹಾಟ್‌ಸ್ಪಾಟ್ ಎಂದು ಗುರುತಿಸಿದೆ. ಈ ಪೈಕಿ ಕರ್ನಾಟಕದ ಬೆಂಗಳೂರು ನಗರ, ಮೈಸೂರು, ಬೆಳಗಾವಿ, ದಕ್ಷಿಣ ಕನ್ನಡ, ಬೀದರ್, ಕಲಬುರ್ಗಿ, ಬಾಗಲಕೋಟೆ ಹಾಗೂ ಧಾರವಾಡ ಜಿಲ್ಲೆಗಳು ಸೇರಿವೆ. ಈ ಎಲ್ಲ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಹಾಗೂ ಜನಪ್ರತಿನಿಧಿಗಳ ಜೊತೆ ವಿಡಿಯೋ ಸಂವಾದ ನಡೆಸಿದ ಬೊಮ್ಮಾಯಿ, ಅಲ್ಲಿನ ಪರಿಸ್ಥಿತಿಗಳ ವಿವರ ಪಡೆದರು.

ಹಾಟ್‌ಸ್ಪಾಟ್ ಪ್ರದೇಶಗಳಲ್ಲಿ ಕಠಿಣ ನಿರ್ಬಂಧ ವಿಧಿಸುವುದು ಜಿಲ್ಲಾಡಳಿತದ ಹೊಣೆ, ಜನರ ಓಡಾಟ ನಿರ್ಬಂಧಿಸದೇ ಇದ್ದರೇ ಸೋಂಕು ಹರಡುವುದನ್ನು ತಡೆಯುವುದು ಅಸಾಧ್ಯ. ಹೆಚ್ಚಿನ ಸಂಖ್ಯೆಯ ಪೊಲೀಸ್ ಬಲ ಒದಗಿಸಲು ಸಿದ್ಧ. ಕೇಂದ್ರ ಸರ್ಕಾರದ ಸೂಚನೆಯಂತೆ ಈ ತಿಂಗಳ 20ರವರೆಗೆ ಬೆಂಗಳೂರು ಸೇರಿದಂತೆ ಹಾಟ್ ಸ್ಪಾಟ್ ಎಂದು ಘೋಷಿಸಿದ ಪ್ರದೇಶಗಳಲ್ಲಿ ಸರ್ಪಗಾವಲು ಹಾಕಿ, ನಿರ್ಬಂಧ ಹೇರಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶಿಸಿದರು.

ಆಧಾರ:ಪ್ರಜಾವಾಣಿ, ದಿನಾಂಕ:16.04.2020